# ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಶ್ರೀ ನಾಗೇಗೌಡ, ನಿವೃತ್ತ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಹಿಂದಿನ ಇಲವಾಲ ಗ್ರಾಮ ಪಂಚಾಯಿತಿ, ಮೈಸೂರು ತಾಲ್ಲೂಕು, ಮೈಸೂರು ಜಿಲ್ಲೆ, ಇವರ ವಿರುದ್ಧ ನಡೆಸಲಾದ ಇಲಾಖಾ ವಿಚಾರಣೆಯ ಅಂತಿಮ ಆದೇಶ ಹೊರಡಿಸುವ ಬಗ್ಗೆ.

ಓದಲಾಗಿದೆ:

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯಿತಿ, ಮೈಸೂರು ರವರ ಪತ್ರ ಸಂಖ್ಯೆ:ಸಿಸಿಎ/01/2015-16 ದಿನಾಂಕ:28.03.2017.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯಿತಿ, ಮೈಸೂರು ರವರ ಎರಡನೇ ಕಾರಣ ಕೇಳುವ ನೋಟೀಸ್ ದಿನಾಂಕ:09.01.2017.
3. ಶ್ರೀ ನಾಗೇಗೌಡ, ನಿವೃತ್ತ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಹಿಂದಿನ ಇಲವಾಲ ಗ್ರಾಮ ಪಂಚಾಯಿತಿ, ರವರ ಲಿಖಿತ ಹೇಳಿಕೆ ದಿನಾಂಕ:22.02.2017.
4. ಉಪ ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ ರವರ ಪತ್ರ ಸಂಖ್ಯೆ:ಪಿಎಸ್‌ಸಿ:13: ಸಿಎನ್‌ಎಸ್:18 ದಿನಾಂಕ:16.08.2018.

<u>ಪ್ರಸ್ತಾವನೆ :</u>

ಮೇಲೆ ಓದಲಾದ ಕ್ರಮ ಸಂಖ್ಯೆ: (1) ರಲ್ಲಿ ಶ್ರೀ ನಾಗೇಗೌಡ, ನಿವೃತ್ತ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಹಿಂದಿನ ಇಲವಾಲ ಗ್ರಾಮ ಪಂಚಾಯಿತಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದ ಅವಧಿಯಲ್ಲಿ ಸರ್ಕಾರದ ಆದೇಶ ಹಾಗೂ ನಿರ್ದೇಶನಗಳನ್ನು ಪಾಲಿಸದೆ ನಕ್ಷೆಯು ಸಕ್ಷಮ ಪ್ರಾಧಿಕಾರದಿಂದ ಅನುಮೋದನೆ ಆಗದ್ದಿದ್ದರು ಅನುಮೋದನೆ ಆಗಿದೆ ಎಂಬುದಾಗಿ ನಮೂನೆ 9 ಮತ್ತು 11 ನ್ನು ವಿತರಿಸುವ ಗ್ರಾಮ ಪಂಚಾಯಿತಿ ಕಾರ್ಯದರ್ಶಿಗಳ ಲಾಗಿನ್‌ಗೆ ಅವಕಾಶ ನೀಡದೆ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಲಾಗಿನ್ ಮೂಲಕವೇ ನಮೂನೆ 9 ಮತ್ತು 11 ನ್ನು ವಿತರಿಸಿರುವ ಮತ್ತು ಈ ಸ್ವತ್ತು ತಂತ್ರಾಂಶದಲ್ಲಿ ಸುಳ್ಳು ಮಾಹಿತಿಯನ್ನು ದಾಖಲಿಸಿ ನಾಗರೀಕ ಸೌಲಭ್ಯಗಳಿಗೆ ಸ್ಥಳಾವಕಾಶ ಬಿಡದೆ ನಾಗರೀಕ ಸೌಲಭ್ಯಗಳಿಗೆ ಮೀಸಲಿರಿಸಬೇಕಾದ ಸ್ಥಳವನ್ನು ಸಹ ಅಕ್ರಮವಾಗಿ ನಿವೇಶನಗಳನ್ನಾಗಿ ಮಾಡಿ ಬಡಾವಣೆ ನಿರ್ಮಿಸಿರುವವರೆಗೆ. ಹೆಚ್ಚಿನ ನಿವೇಶನಗಳು ದೊರೆಯುವಂತೆ ಮಾಡಿ ಅಕ್ರಮ ಬಡಾವಣೆ ನಿರ್ಮಾಣಕ್ಕೆ ಸಹಕರಿಸಿರುವರೆಂಬ ಆರೋಪಗಳನ್ನು ಮಾಡಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (2) ರಲ್ಲಿ ಆಪಾದಿತರ ವಿರುದ್ಧ ಮಾಡಲಾದ ಆರೋಪಗಳು ರುಜುವಾತಗಿರುವುದೆಂದು ವಿಚಾರಣಾಧಿಕಾರಿಗಳು ವರದಿಯನ್ನು ನೀಡಿದ್ದು, ಅದರಂತೆ ಆಪಾದಿತರಿಗೆ ಎರಡನೇ ಕಾರಣ ಕೇಳುವ ನೋಟೀಸ್ಸನ್ನು ಜಾರಿ ಮಾಡಿ ವಿವರಣೆ ಕೋರಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರಲ್ಲಿ ಎರಡನೇ ಕಾರಣ ಕೇಳುವ ನೋಟೀಸ್ಸಿಗೆ ಶ್ರೀ ನಾಗೇಗೌಡ, ನಿವೃತ್ತ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ರವರು ತಮ್ಮ ಲಿಖಿತ ಹೇಳಿಕೆಯನ್ನು ಸಲ್ಲಿಸಿದ್ದು, ಸದರಿಯವರ ಲಿಖಿತ ಹೇಳಿಕೆಯನ್ನು ಪರಿಶೀಲಿಸಲಾಗಿದ್ದು, ಸದರಿಯವರ ವಿರುದ್ಧ ಮಾಡಲಾದ ಎಲ್ಲಾ ಆರೋಪಗಳನ್ನು ತಳ್ಳಿಹಾಕಿರುತ್ತಾರೆ. ಆದರೆ ಸದರಿಯವರ ಲಿಖಿತ ಹೇಳಿಕೆಯನ್ನು ಒಪ್ಪಲು ಬರುವುದಿಲ್ಲವಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4) ರಲ್ಲಿ ಆರೋಪಿತರಿಗೆ ವಿಧಿಸಬಹುದಾದ ದಂಡನೆಯ ಬಗ್ಗೆ ಸಹಮತಿಯನ್ನು ಕರ್ನಾಟಕ ಲೋಕಾಸೇವಾ ಆಯೋಗವು ನೀಡಿರುತ್ತದೆ.

ಮೇಲಿನ ಕಂಡಿಕೆಗಳಲ್ಲಿ ವಿವರಿಸಿದಂತೆ ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರವು ಈ ಕೆಳಗಿನಂತೆ ದಂಡನೆ ವಿಧಿಸಿ ಆದೇಶಿಸಲು ತೀರ್ಮಾನಿಸಿದೆ.

ಅದರಂತೆ ಈ ಆದೇಶ.

<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ:471:ಗ್ರಾಪಂಕಾ2017 ಬೆಂಗಳೂರು, ದಿನಾಂಕ-16-11-2018.</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರವು, ಶ್ರೀ ನಾಗೇಗೌಡ, ನಿವೃತ್ತ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಹಿಂದಿನ ಇಲವಾಲ ಗ್ರಾಮ ಪಂಚಾಯಿತಿ, ಮೈಸೂರು ತಾಲ್ಲೂಕು, ಮೈಸೂರು

ಜಿಲ್ಲೆ, ಇವರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮ 1957 ರ ನಿಯಮ 214(1)(ಎ) ಅನುಸಾರ ಪಿಂಚಣಿ ಸೌಲಭ್ಯದಲ್ಲಿ **ಶೇ.** 15 ನ್ನು 5 ವರ್ಷಗಳ ಅವಧಿಗೆ ಕಡಿತಗೊಳಿಸುವ ದಂಡನೆ ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

16/11

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಮೈಸೂರು ಜಿಲ್ಲೆ.
3. ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ, ನಂಜನಗೂಡು ತಾಲ್ಲೂಕು, ಮೈಸೂರು ಜಿಲ್ಲೆ.
4. ಶ್ರೀ ನಾಗೇಗೌಡ, ನಿವೃತ್ತ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಹಿಂದಿನ ಇಲವಾಲ ಗ್ರಾಮ ಪಂಚಾಯಿತಿ, ಮೈಸೂರು ತಾಲ್ಲೂಕು, ಮೈಸೂರು ಜಿಲ್ಲೆ.
5. ಗಣಕ ಕೋಶ.
6. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.